ಕಾರ್ಯಪಾಲಕ ಅಭಿಯಂತರರ ಕಛೇರಿ
ನಂ.2ನೇ ಕಟ್ಟಡಗಳ ವಿಭಾಗ,
ಲೋಇ ಅನೆಕ್ಸ್ ಕಟ್ಟಡ, 1ನೇ ಮಹಡಿ,
ಕೆ.ಆರ್. ವೃತ್ತ, ಬೆಂಗಳೂರು 01.

ದೂರವಾಣಿ : 080-22122856
ಫ್ಯಾಕ್ಸ್ : 080-22123368
ಇ ಮೇಲ್: eebldno2@gmail.com

(ಲೋಕೋಪಯೋಗಿ ಇಲಾಖೆ)

ಸಂಖ್ಯೆ:ಕಾನಿಇಂ:ಕವಿ2:ಸಇಂ-3 :2025-26/2984 ದಿನಾಂಕ: 18/8/25

ಇವರಿಗೆ:

President,
Vijaya Education Institute Trust,
Southend Circle, 3rd Block,
Jayanagar, Bengaluru-560011.

ಮಾನ್ಯರೆ,

ವಿಷಯ: **President, Vijaya Education Institute Trust, Southend Circle, 3rd Block, Jayanagar, Bengaluru-560011** ರವರ **2025-2026** ನೇ ಸಾಲಿಗೆ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ನೀಡುವ ಬಗ್ಗೆ.

ಉಲ್ಲೇಖ: 1)ತಮ್ಮ ಮನವಿ ಪತ್ರ ದಿನಾಂಕ:05.06.2025.
2)ಸರ್ಕಾರದ ಅಪರ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ:59/ಬಿಇಡಿ/2019 ದಿ:06.05.2022.
3)ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.9.ನೇ ಕಟ್ಟಡಗಳ ಉಪ ವಿಭಾಗ, ಬೆಂಗಳೂರು ರವರ ಕಛೇರಿ ಪತ್ರ ಸಂಖ್ಯೆ: 582/25-26: ದಿ:15.07.2025.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದಲ್ಲಿ **Chief Executive Officer, Vijaya Education Institute Trust, Southend Circle, 3rd Block, Jayanagar, Bengaluru** ಶಾಲೆಯ ಕಟ್ಟಡಕ್ಕೆ ಸಂಬಂಧಿಸಿದಂತೆ ಸುರಕ್ಷತಾ ಪ್ರಮಾಣ ಪತ್ರವನ್ನು ಕೋರಿರುತ್ತೀರಿ.

ವಿಜಯ ವಿದ್ಯಾ ಸಂಸ್ಥೆ, 3ನೇ ಬ್ಲಾಕ್, ಜಯನಗರ ಬೆಂಗಳೂರು -11 ರಲ್ಲಿ ಈ ಕೆಳಕಂಡ ವಿಭಾಗಗಳು ಕಾರ್ಯನಿರ್ವಹಿಸುತ್ತಿರುತ್ತವೆ.

1. ವಿಜಯ ಕನ್ನಡ ಹಿರಿಯ ಪ್ರಾಥಮಿಕ ಶಾಲೆ,
2. ವಿಜಯ ಆಂಗ್ಲ ಪ್ರಾಥಮಿಕ ಶಾಲೆ
3. ವಿಜಯ ಪ್ರೌಢಶಾಲೆ
4. ವಿಜಯ ಸಂಯುಕ್ತ ಪದವಿ ಪೂರ್ವ ಕಾಲೇಜು ಮತ್ತು
5. ವಿ.ಇ.ಐ.ಟಿ ಪದವಿ ಕಾಲೇಜು.

ಉಲ್ಲೇಖ (2)ರ ಸರ್ಕಾರದ ಸುತ್ತೋಲೆ ತಿದ್ದುಪಡಿಯ ಅನುಸಾರ ಲೋಕೋಪಯೋಗಿ ಇಲಾಖೆಯ ಸಂಹಿತೆಯ ಅನ್ವಯ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರವನ್ನು ಈ ಕಛೇರಿಯಿಂದ ಪಡೆಯಲು ಮೌಲ್ಯ ಮಾಪನ ಶುಲ್ಕ **ರೂ.5000.00** ಅನ್ನು (ಡಿಡಿ ಸಂಖ್ಯೆ: **502711** ದಿನಾಂಕ: **31-07-2025**) ಈ ಕಛೇರಿಗೆ ಸಲ್ಲಿಸಿರುತ್ತೀರಿ.

ಮುಂದುವರೆದು, ಕಾಲೇಜು ಕಟ್ಟಡವನ್ನು ಈ ಹಿಂದೆ ನೀಡಿದ್ದ ದಾಖಲೆಗಳೊಂದಿಗೆ ದಿ: 02.07.2025ರಂದು ಕಾಲೇಜು ಸಿಬ್ಬಂದಿಯವರ ಸಮ್ಮುಖದಲ್ಲಿ ಜಂಟಿ ಪರಿವೀಕ್ಷಣೆ ಮಾಡಿ ಸಾಫ್ಟ್ ರೂಫ್‌ನಲ್ಲಿ ತೇವಾಂಶ ಕಂಡುಬಂದಿದ್ದು, ಸಾಫ್ಟ್ ರೂಫ್‌ಗಳನ್ನು ವೈಜ್ಞಾನಿಕವಾಗಿ ಸರಿಪಡಿಸಲು ಸೂಚಿಸಲಾಗಿರುತ್ತದೆ ಮತ್ತು ಸದರಿ ಕಟ್ಟಡವು ಮೇಲ್ನೋಟಕ್ಕೆ ಸುಸ್ಥಿತಿಯಲ್ಲಿರುವುದು ಕಂಡುಬಂದಿರುತ್ತದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.9.ನೇ ಕಟ್ಟಡಗಳ ಉಪ ವಿಭಾಗ, ಬೆಂಗಳೂರು ರವರು ಉಲ್ಲೇಖ(3)ರ

ಪತ್ರದಲ್ಲಿ ಶಿಫಾರಸ್ಸು ಮಾಡಿರುವ ಹಿನ್ನಲೆಯಲ್ಲಿ ಈ ಕೆಳಕಂಡ ಷರತ್ತುಗಳನ್ನೊಳಪಟ್ಟು ಸದರಿ ಕಟ್ಟಡವು **"STRUCTURALLY STABLE"** ಎಂದು ಪರಿಗಣಿಸಿ ನಿರಾಕ್ಷೇಪಣಾ ಪತ್ರವನ್ನು ದಿನಾಂಕ:**06-08-2025** ರಿಂದ ದಿನಾಂಕ: **05-08-2026** ರವರೆಗೆ ನೀಡಲಾಗಿರುತ್ತದೆ.

1) ಸದರಿ ಕಟ್ಟಡವನ್ನು ನಿರ್ವಹಣೆ ಮಾಡುವ ಜವಬ್ದಾರಿಯು ಸದರಿ ಸಂಸ್ಥೆಯವರದಾಗಿರುತ್ತದೆ.
2) ಅಗ್ನಿ ಶಾಮಕ ಇಲಾಖೆಯಿಂದ ಅಗ್ನಿ ಸುರಕ್ಷತಾ ಪ್ರಮಾಣ ಪತ್ರ (Fire Safety Compliance), ಮತ್ತು ಇತರೆ ಅವಶ್ಯಕ ಅನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.
3) ಕಟ್ಟಡವನ್ನು ಕಾಲಕಾಲಕ್ಕೆ ಉತ್ತಮ ಗುಣಮಟ್ಟದ ಸಾಮಗ್ರಿಗಳನ್ನೇ ಬಳಸಿ ತಜ್ಞರಿಂದ ವ್ಯವಸ್ಥಿತವಾಗಿ ವಾರ್ಷಿಕ ನಿರ್ವಹಣೆ ಮಾಡತಕ್ಕದ್ದು.
4) ವಿದ್ಯಾರ್ಥಿಗಳ, ಸಿಬ್ಬಂದಿಗಳ ಹಾಗೂ ಶಿಕ್ಷಕರ ಸುರಕ್ಷತೆಗೆ ಸಕಲ ವ್ಯವಸ್ಥೆಯನ್ನು ನೀಡಿ ಸೂಕ್ತ ಸುರಕ್ಷತಾ ವ್ಯವಸ್ಥೆಯನ್ನು ನಿಯಮಾನುಸಾರ ಅಳವಡಿಸತಕ್ಕದ್ದು.
5) ಕಟ್ಟಡದ ಸಧೃಡತೆಗೆ ದಕ್ಕೆಯಾಗುವಂತಹ ಯಾವುದೇ ಇತರೆ ಕಾಮಗಾರಿಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆಯದೇ ಕೈಗೊಳ್ಳತಕ್ಕದಲ್ಲ.
6) ಮುಂದಿನ ದಿನಗಳಲ್ಲಿ ಕಟ್ಟಡದ ಯಾವುದಾದರು ಬದಲಾವಣೆ ಅಥವಾ ನಿರ್ಮಾಣವನ್ನು ಸಂಬಂಧಪಟ್ಟ ಪ್ರಾಧಿಕಾರದ ಅನುಮತಿ ಇಲ್ಲದೆ ಮಾಡಿದ್ದಲ್ಲಿ ಸದರಿ ಪ್ರಮಾಣ ಪತ್ರವು ತನ್ನಿಂತಾನೆ ರದ್ದುಗೊಳ್ಳುತ್ತದೆ.

ತಮ್ಮ ವಿಶ್ವಾಸಿ,

ಕಾರ್ಯಪಾಲಕ ಅಭಿಯಂತರರು,
ನಂ.2ನೇ ಕಟ್ಟಡಗಳ ವಿಭಾಗ, ಬೆಂಗಳೂರು.